ಕರ್ನಾಟಕ ಸರ್ಕಾರ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ

ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆರ್.ಸಿ.ಹೆಚ್. ಘಟಕ, ಬೆಂಗಳೂರು ಗ್ರಾಮಾಂತರ ಜಿಲ್ಲೆ

ಕೊಠಡಿ ಸಂಖ್ಯೆ: 207, 2ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಇ-ಮೇಲ್: **rchobangalorerural@gmail.com**

ಸಂಖ್ಯೆ: **HFW/NHM/NUHM/15th FC/2024-25** ದಿನಾಂಕ: 17/03/2025

## "ನೇಮಕಾತಿ ಪ್ರಕಟಣೆ"

**ವಿಷಯ:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇಲ್ಲಿ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದ PM-ABHIM ಕಾರ್ಯಕ್ರಮಗಳಡಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡುವ ಬಗ್ಗೆ.

◆◆◆

ಈ ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದ PM-ABHIM ಕಾರ್ಯಕ್ರಮದಡಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಕೆಳಕಂಡಂತೆ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರ.ಸಂ | ಹುದ್ದೆ | ಹುದ್ದೆಗಳ ಸಂಖ್ಯೆ | ಮಾಸಿಕ ಸಂಚಿತ ವೇತನ | ಮೀಸಲಾತಿ |
|---|---|---|---|---|
| 1 | ವೈದ್ಯಾಧಿಕಾರಿ | 14 | 60,000/- | ST (2), Cat-I (1), GM (6), SC (2), 2B (1), 2A (1), 3A (1) |
| 2 | ಶುಶ್ರೂಷಕರು | 10 | 14,187/- | 2A (2), GM (5), SC (2), 2B (1) |
| 3 | ಪ್ರಯೋಗಶಾಲಾ ತಂತ್ರಜ್ಞರು | 10 | 12,525/- | Cat-I (1), GM (5), SC (2), 2B (1), 2A (1) |
| 4 | ಕಿರಿಯ ಆರೋಗ್ಯ ಸಹಾಯಕರು | 09 | 14,044/- | Cat-I (1), GM (4), 2B (1), 2A (1), SC (1), 3A (1) |

- **ವಿದ್ಯಾರ್ಹತೆ, ಮೀಸಲಾತಿ ಮತ್ತು ಹೆಚ್ಚಿನ ವಿವರಗಳನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.**
- ಮೇಲ್ಕಂಡ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಎಲ್ಲಾ ಮೂಲ ದಾಖಲಾತಿಗಳೊಂದಿಗೆ **ದಿನಾಂಕ: 27/03/2025 ರಂದು ಬೆಳಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ** ಸಂದರ್ಶನದ ಸ್ಥಳದಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡು, ಅರ್ಜಿಗಳನ್ನು ಪಡೆದುಕೊಳ್ಳತಕ್ಕದ್ದು ಹಾಗೂ ನೋಂದಾಯಿಸಿಕೊಂಡ ಅಭ್ಯರ್ಥಿಗಳಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ಅರ್ಹರಿರುವ ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಪರಿಗಣಿಸಲಾಗುವುದು. ಈ ಮೇಲ್ಕಂಡ ನೇಮಕಾತಿಯು ಕೆಲವು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ. ಸದರಿ ಹುದ್ದೆಗಳ ಆಯ್ಕೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ / ಆಯ್ಕೆ ಸಮಿತಿಯ ನಿರ್ಣಯಗಳು ಅಂತಿಮವಾಗಿರುತ್ತವೆ.
- ಮೇಲ್ಕಂಡ ಹುದ್ದೆಗಳಿಗೆ ಅಗತ್ಯವಿರುವಷ್ಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸದೇ ಇದ್ದಲ್ಲಿ ಅಥವಾ ಹೆಚ್ಚುವರಿ ಅರ್ಜಿಗಳನ್ನು ಸಲ್ಲಿಸಿರುವ ಅರ್ಜಿಗಳಲ್ಲಿ ದಿ: 31/03/2025 ರೊಳಗೆ ಖಾಲಿಯಾಗುವ ಹುದ್ದೆಗಳನ್ನು Rolling Advertisement ಆಧಾರದಲ್ಲಿ ನಿಯಮಾನುಸಾರ ಭರ್ತಿ ಮಾಡಲಾಗುವುದು.
- **ನೇರ ಸಂದರ್ಶನ ನಡೆಯುವ ಸ್ಥಳ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ. 207, 2ನೇ ಮಹಡಿ, ಬೀರಸಂದ್ರ ಗ್ರಾಮ, ವಿಶ್ವನಾಥಪುರ ಅಂಚೆ, ಕುಂದಾಣ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ - 562110.
- **ವಿಶೇಷ ಸೂಚನೆ:** ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಹುದ್ದೆಗೆ ಅಗತ್ಯವಿರುವ ಮೂಲ ದಾಖಲಾತಿಗಳೊಂದಿಗೆ ಹಾಜರಾಗುವುದು ಹಾಗೂ ಪಾಸ್‌ಪೋರ್ಟ್ ಅಳತೆಯ 01 ಭಾವಚಿತ್ರದೊಂದಿಗೆ ಮೂಲ ದಾಖಲಾತಿಗಳ ನಕಲು ಪ್ರತಿಗಳಿಗೆ ಸ್ವಯಂ ದೃಢೀಕರಿಸಿ ಅರ್ಜಿಗೆ ಲಗತ್ತಿಸುವುದು.

ಸಹಿ/-

ಉಪಾಧ್ಯಕ್ಷರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ,
ಬೆಂಗಳೂರು ಗ್ರಾಮಾಂತರ ಜಿಲ್ಲೆ

ವಾಸಸಂಇ/ಸಿಪಿ/ಎಎಎ/5749/2024-25